ನಂ. 2071
ದಿ. 27/08/15
ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಬೆಂಗಳೂರು

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೆ: ಕರ್ನಾಟಕ ವಿದ್ಯುತ್ ನಿಗಮ ನಿಯಮಿತಕ್ಕೆ ಗದಗ ಜಿಲ್ಲೆಯ ಕಪ್ಪದಗುಡ್ಡದಲ್ಲಿ 12.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಬಗ್ಗೆ.

**ಓದಲಾಗಿದೆ:**
1) ಸರ್ಕಾರಿ ಆದೇಶ ಸಂಖ್ಯೆ : ಇಎನ್ 569 ಎನ್‌ಸಿಇ 2009, ದಿನಾಂಕ:26.11.2009
2) ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ : ಇಎನ್ 569 ಎನ್‌ಸಿಇ 2009 ದಿನಾಂಕ:28.4.2010.
3) ಏಕ ಕಡತ ಪದ್ಧತಿಯಲ್ಲಿ ಕೆ.ಆರ್.ಇ.ಡಿ.ಎಲ್ ಸಂಸ್ಥೆಯು ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: 23-K
4) ಸರ್ಕಾರಿ ಆದೇಶ ಸಂಖ್ಯೆ : ಇಎನ್ 444 ಎನ್‌ಸಿಇ 2011, ದಿನಾಂಕ: 11.01.2012
5) ಸರ್ಕಾರಿ ಆದೇಶ ಸಂಖ್ಯೆ : ಇಎನ್ 165 ಎನ್‌ಸಿಇ 2015, ದಿನಾಂಕ: 30.07.2015.

* * *

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರಿ ಆದೇಶದಲ್ಲಿ ಮೆ:ಕರ್ನಾಟಕ ವಿದ್ಯುತ್ ನಿಗಮ ನಿಯಮಿತಕ್ಕೆ ಗದಗ ಜಿಲ್ಲೆಯ ಕಪ್ಪದಗುಡ್ಡ ಪ್ರದೇಶದಲ್ಲಿ 39.75 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಕೆಲವೊಂದು ಷರತ್ತುವಿಧಿಸಿ ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಸರ್ಕಾರದ ತಿದ್ದುಪಡಿ ಆದೇಶದಲ್ಲಿ, ಮೂಲ ಹಂಚಿಕೆ ಆದೇಶದಲ್ಲಿನ ಷಡ್ಯೂಲ್‌ನಲ್ಲಿ ಕೆಲವೊಂದು ಮಾರ್ಪಾಡು ಮಾಡಿ ತಿದ್ದುಪಡಿ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರನ್ವಯ ಏಕ ಕಡತ ಪದ್ಧತಿಯಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಸಂಸ್ಥೆಯು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಸರ್ಕಾರದ ಆದೇಶ ಸಂಖ್ಯೆ: ಇಎನ್ 360 ಎನ್‌ಸಿಇ 2004 ದಿನಾಂಕ: 21.12.2004 ರನ್ವಯ ಮೆ: ದೀಪಕ್ ಎಂ ಪಾಟೀಲ್ ಕಂಪನಿಗೆ, ಗದಗ ಜಿಲ್ಲೆಯ ಕಪ್ಪದಗುಡ್ಡ ಪ್ರದೇಶದಲ್ಲಿ ಹಂಚಿಕೆಯಾಗಿರುವ 5.25 ಮೆ.ವ್ಯಾ. (1.75 ಮೆ.ವ್ಯಾ. + 3.5 ಮೆ.ವ್ಯಾ) ಸಾಮರ್ಥ್ಯದಲ್ಲಿ 1.75 ಮೆ.ವ್ಯಾ. ಸಾಮರ್ಥ್ಯವು ಮೆ: ಕರ್ನಾಟಕ ವಿದ್ಯುತ್ ನಿಗಮ ನಿಯಮಿತಕ್ಕೆ ಹಂಚಿಕೆಯಾಗಿರುವ ಜಾಗದಲ್ಲಿ ಬರುತ್ತಿದ್ದು, ಈ ಸ್ಥಳವನ್ನು ಮೆ: ದೀಪಕ್ ಎಂ ಪಾಟೀಲ್ ಕಂಪನಿಗೆ ಉಳಿಸಿಕೊಂಡು ಯೋಜನೆಯ ಅನುಷ್ಠಾನಕ್ಕೆ ಅವಕಾಶ ಕಲ್ಪಿಸಬೇಕೆಂದು ಹಾಗೂ ಇದೇ ಸ್ಥಳದಲ್ಲಿ ಅಂದರೆ ಗದಗ ಜಿಲ್ಲೆಯ ಕಪ್ಪದಗುಡ್ಡ ಪ್ರದೇಶದಲ್ಲಿ ಮೆ: ಚಿತ್ರದುರ್ಗ ವಿಂಡ್ ಪವರ್ ಪ್ರೈ.ಲಿ., ಕಂಪನಿಗೆ ಹಂಚಿಕೆಯಾಗಿರುವ 3.0 ಮೆ.ವ್ಯಾ. ಮತ್ತು 9.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಕ್ರಮವಾಗಿ ಸರ್ಕಾರಿ ಆದೇಶ ಸಂಖ್ಯೆ: ಇಎನ್ 444 ಎನ್‌ಸಿಇ 2011, ದಿನಾಂಕ: 11.01.2012 ರಲ್ಲಿ ಹಾಗೂ ಸರ್ಕಾರಿ ಆದೇಶ ಸಂಖ್ಯೆ:ಇಎನ್ 165 ಎನ್‌ಸಿಇ 2015, ದಿನಾಂಕ: 30.07.2015 ರಲ್ಲಿ ರದ್ದುಪಡಿಸಿದ್ದು, ಸದರಿ 12.5 ಮೆ.ವ್ಯಾ. ಸಾಮರ್ಥ್ಯವನ್ನು ಕೆ.ಪಿ.ಸಿ.ಎಲ್.ಗೆ ಪುನರ್ ಹಂಚಿಕೆ ಮಾಡಿ ಯೋಜನೆಯ ಸಾಮರ್ಥ್ಯವನ್ನು 52.25 ಮೆ.ವ್ಯಾ. ಎಂದು ನಮೂದಿಸಿ ತಿದ್ದುಪಡಿ ಆದೇಶ ಹೊರಡಿಸುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

--2)

Wind Section
Inward No. 15762
Date: 03-09-15
Sig.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 162 ಎನ್‌ಸಿಇ 2015,**
**ಬೆಂಗಳೂರು, ದಿನಾಂಕ:24.8.2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಮೂಲ ಹಂಚಿಕೆ ಆದೇಶ ಸಂಖ್ಯೆ: ಇಎನ್ 569 ಎನ್‌ಸಿಇ 2009 ದಿನಾಂಕ:26.11.2009 ರಲ್ಲಿ ಮೆ: ಕರ್ನಾಟಕ ವಿದ್ಯುತ್ ನಿಗಮ ನಿಯಮಿತ ಸಂಸ್ಥೆಗೆ ಗದಗ ಜಿಲ್ಲೆಯ ಕಪ್ಪದಗುಡ್ಡ ಪ್ರದೇಶದಲ್ಲಿ ಹಂಚಿಕೆಯಾಗಿದ್ದ 39.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಅಕ್ಷಾಂಶ ಮತ್ತು ರೇಖಾಂಶಗಳ ವ್ಯಾಪ್ತಿಯಲ್ಲಿ ಮೆ: ಚಿತ್ರದುರ್ಗ ವಿಂಡ್ ಪವರ್ ಪ್ರೈ.ಲಿ. ಕಂಪನಿಗೆ ಕಪ್ಪದಗುಡ್ಡ ಪ್ರದೇಶ-3 ರಲ್ಲಿ ಹಂಚಿಕೆಯಾಗಿ ರದ್ದುಗೊಂಡಿರುವ 3.0 ಮೆ.ವ್ಯಾ. ಹಾಗೂ 9.5 ಮೆ.ವ್ಯಾ. ಸೇರಿ ಒಟ್ಟು 12.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಕಂಡ ಷರತ್ತಿಗಳಿಗೊಳಪಟ್ಟು ಮೆ: ಕರ್ನಾಟಕ ವಿದ್ಯುತ ನಿಗಮ ನಿಯಮಿತಕ್ಕೆ ಹಂಚಿಕೆ ಮಾಡಿ ಆದೇಶಿಸಿದೆ.

1. ಇದೇ ಪ್ರದೇಶದಲ್ಲಿ ಮೆ: ದೀಪಕ್ ಎಂ ಪಾಟೀಲ್ ಕಂಪನಿಗೆ ಹಂಚಿಕೆಯಾಗಿರುವ 1.75 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಅನುಷ್ಠಾನಕ್ಕೆ ಕೆ.ಪಿ.ಸಿ.ಎಲ್. ಸಂಸ್ಥೆಯು ಅವಕಾಶ ಕಲ್ಪಿಸತಕ್ಕದ್ದು.
2. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ: 06.1.2012 ರನ್ವಯ ಕೆ.ಪಿ.ಸಿ.ಎಲ್. ಸಂಸ್ಥೆಯು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
3. ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿರುವಂತೆ ಪ್ರಸ್ತುತ ಹಂಚಿಕೆಯಾಗಿರುವ 12.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 6 ವರ್ಷಗಳ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
4. ಕೆ.ಪಿ.ಸಿ.ಎಲ್. ಸಂಸ್ಥೆಯು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
5. ಗಾಳಿ ಚಕ್ರದ ಹಬ್ ಹೈಟಿನಲ್ಲಿ ಪವನ ವೇಗದ ಅಳತೆ ಖಾತರಿ ಪಡಿಸಲು ಕೆಳಗಿನ ಕೋಷ್ಟಕದಲ್ಲಿ ವಿವರಿಸಿರುವಂತೆ ಪ್ರತಿ 5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಒಂದರಂತೆ ಗಾಳಿ ಕಂಬವನ್ನು (ವಿಂಡ್ ಮಾಸ್ಟ್) ಅಳವಡಿಸಬೇಕು. ಅಳತೆ ವಿವರಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸುವುದು.

| ಗಾಳಿ ಶಕ್ತಿ ವಿದ್ಯುತ್ತಿನ ದೂರ ಸಾಮರ್ಥ್ಯ | 5 ಮೆಗಾವ್ಯಾಟ್ ಗಾಳಿ ಯೋಜನೆಯಲ್ಲಿ ಸಾಧಾರಣ ಗಾಳಿ ಶಕ್ತಿ ವಿದ್ಯುತ್ತಿನ ಸಂಖ್ಯೆ | ಹಾಕಬೇಕಾಗಿರುವ ಗಾಳಿ ಕಂಬಗಳ (ವಿಂಡ್ ಮಾಸ್ಟ್‌ಗಳ) ಸಂಖ್ಯೆ |
|---|---|---|
| > 200 ಕಿ.ವ್ಯಾ. ನಿಂದ 300 ಕಿ.ವ್ಯಾ. | 18 | 1 |
| > 300 ಕಿ.ವ್ಯಾ. ನಿಂದ 500 ಕಿ.ವ್ಯಾ. | 15 | 1 |
| > 500 ಕಿ.ವ್ಯಾ. ನಿಂದ 750 ಕಿ.ವ್ಯಾ. | 12 | 1 |
| > 750 ಕಿ.ವ್ಯಾ. ನಿಂದ 1000 ಕಿ.ವ್ಯಾ. | 8 ರಿಂದ 10 | 1 |

6. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
7. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು.

--3)

8. ಸರ್ಕಾರಿ ಆದೇಶ ಸಂ:ಇಎನ್ 95 ಇಬಿಎಸ್ 2009 ದಿ:29.12.2009 ರನ್ವಯ ವಿನಾಯಿತಿ ಸೌಲಭ್ಯಗಳು ಅನ್ವಯಿಸುವುದು.
9. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
10. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

24/8/15

ಇವರಿಗೆ :

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ ಬೆಂಗಳೂರು–1.
2 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು–9.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು–1.
6 ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ.
7 ಉಪ ಅರಣ್ಯ ಸಂರಕ್ಷಣಾಧಿಕಾರಿ ಗದಗ ಜಿಲ್ಲೆ.
8 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ.
9 ಮೆ: ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು–560 001.
10 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
11 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.